ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಜಿಲ್ಲಾಧಿಕಾರಿಗಳ ಸಂಕೀರ್ಣ ಮತ್ತು ಮಿನಿ ವಿಧಾನಸೌಧದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಛೇರಿಗಳ ಕುರಿತು

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ(ನಾಮನಿರ್ದೇಶನ ಹೊಂದಿದವರು) –

1058 (1254) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಜಿಲ್ಲಾಧಿಕಾರಿಗಳ ಕಛೇರಿ ಸಂಕೀರ್ಣಗಳ ಸಂಖ್ಯೆ ಎಷ್ಟು; ಇದರ ನಿರ್ಮಾಣಕ್ಕೆ ತಗುಲಿದ ವೆಚ್ಚವೆಷ್ಟು; ಅವುಗಳಲ್ಲಿರುವ ಜಿಲ್ಲಾ ಮಟ್ಟದ ಕಛೇರಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ಕಛೇರಿವಾರು ಮಾಹಿತಿಯನ್ನು ಒದಗಿಸುವುದು)

(ಆ) ರಾಜ್ಯದಲ್ಲಿರುವ ಮಿನಿ ವಿಧಾನಸೌಧ ಕಟ್ಟಡಗಳ ಸಂಖ್ಯೆ ಎಷ್ಟು; ಇದರ ನಿರ್ಮಾಣಕ್ಕೆ ತಗುಲಿದ ವೆಚ್ಚವೆಷ್ಟು; ಅವುಗಳಲ್ಲಿರುವ ತಾಲ್ಲೂಕು ಮಟ್ಟದ ಕಛೇರಿಗಳ ಸಂಖ್ಯೆ ಎಷ್ಟು; ಸ್ವಂತ ಕಟ್ಟಡದಲ್ಲಿರುವ ಮತ್ತು ಬಾಡಿಗೆ ಕಟ್ಟಡದಲ್ಲಿರುವ ತಾಲ್ಲೂಕು ಮಟ್ಟದ ಕಛೇರಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ಕಛೇರಿವಾರು ಮಾಹಿತಿಯನ್ನು ಒದಗಿಸುವುದು)

(ಇ) ಸ್ವಾತಂತ್ರ್ಯ ದೊರೆತು 75 ವರ್ಷಗಳಾದರೂ ಕೆಲವು ಇಲಾಖೆಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವುದಕ್ಕೆ ಕಾರಣಗಳೇನು/ಇದನ್ನು ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗುವುದು?